ನೇಮಕಾತಿ ಅಧಿಸೂಚನೆ

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ, ಕಲಬುರಗಿ

ಅಧಿಸೂಚನೆ ಸಂಖ್ಯೆಃ ಜಿನ್ಯಾಕ/ಆಡಳಿತ/ 18 /2026 ದಿನಾಂಕಃ 05.11.2026

ವಿಷಯ : ಕಲಬುರಗಿ ಜಿಲ್ಲೆಯ ನ್ಯಾಯಾಲಯಗಳಲ್ಲಿ, ಕಲ್ಯಾಣ ಕರ್ನಾಟಕ **ಸ್ಥಳೀಯ ವೃಂದದಲ್ಲಿ** ಖಾಲಿ ಇರುವ **ಶೀಘ್ರಲಿಪಿಗಾರ ಗ್ರೇಡ-3** ಹುದ್ದೆಗಳ ನೇರ ನೇಮಕಾತಿ ಕುರಿತು.

ಉಲ್ಲೇಖ

1. ಕರ್ನಾಟಕ ನಾಗರಿಕ ಸೇವಾ ಸಾಮಾನ್ಯ ನೇಮಕಾತಿ ನಿಯಮ-1977 (ತಿದ್ದುಪಡಿ) ನಿಯಮ, 2021.
2. ಕರ್ನಾಟಕ ಅಧೀನ ನ್ಯಾಯಾಲಯಗಳು (ಮಿನಿಸ್ಟೀರಿಯಲ್ ಮತ್ತು ಇತರೆ ಹುದ್ದೆಗಳು) (ನೇಮಕಾತಿ) ನಿಯಮಗಳು 1982 ಮತ್ತು (ತಿದ್ದುಪಡಿ) ನಿಯಮಗಳು 2007 ಹಾಗೂ 2021.
3. ಸರ್ಕಾರಿ ಆದೇಶ ಸಂಃ ಸಿಆಸುಇ 08 ಸೆಹಿಮ 1995, ಬೆಂಗಳೂರು ದಿನಾಂಕಃ 20.06.1995.
4. ಕರ್ನಾಟಕ ಉಚ್ಚನ್ಯಾಯಾಲಯದ ಪತ್ರದ ಸಂಃ ಡಿ.ಜೆ.ಎ/712/2025 ದಿನಾಂಕಃ 09.02.2026.
5. ಕರ್ನಾಟಕ ಉಚ್ಚನ್ಯಾಯಾಲಯದ ಪತ್ರದ ಸಂಃ ಡಿ.ಜೆ.ಎ/400/2021 ದಿನಾಂಕಃ 12.03.2026

-:oOo:-

ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಸಲ್ಲಿಸಲು ಆರಂಭ ದಿನಾಂಕ	**16.11.2026**
ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ	**15.12.2026** ಸಮಯ ರಾತ್ರಿ 11.59 ಗಂಟೆಯವರೆಗೆ
ಶುಲ್ಕ ಪಾವತಿಸಲು ಕಡೆಯ ದಿನಾಂಕ	**17.12.2026**

ಈ ಮೂಲಕ, ಕಲಬುರಗಿ ಜಿಲ್ಲೆಯ ನ್ಯಾಯಾಲಯಗಳಲ್ಲಿ ಕಲ್ಯಾಣ ಕರ್ನಾಟಕ **ಸ್ಥಳೀಯ ವೃಂದದಲ್ಲಿ** ಖಾಲಿ ಇರುವ **ಶೀಘ್ರಲಿಪಿಗಾರ ಗ್ರೇಡ-3** ಹುದ್ದೆಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಅಹ್ವಾನಿಸಲಾಗಿದೆ. ಅಭ್ಯರ್ಥಿಗಳು ಅರ್ಜಿಯನ್ನು ಕಲಬುರಗಿ ಜಿಲ್ಲಾ ನ್ಯಾಯಾಲಯದ ಅಧಿಕೃತ ಜಾಲ ತಾಣವಾದ https://kalaburagi.dcourts.gov.in/Judges/online-recruitment/ ನಲ್ಲಿ ನೀಡಲಾದ ಲಿಂಕ್ ಮೂಲಕ ಮೇಲೆ ಹೇಳಿದ ದಿನಾಂಕಗಳ ಒಳಗಾಗಿ ಆನ್‌ಲೈನ್ ಮುಖಾಂತರ ಮಾತ್ರ ಅರ್ಜಿ ಸಲ್ಲಿಸತಕ್ಕದ್ದು.

ಹುದ್ದೆಃ ಶೀಘ್ರಲಿಪಿಗಾರ ಗ್ರೇಡ-3 **(Stenographer Grade-3)**

ಒಟ್ಟು ಹುದ್ದೆಗಳ ಸಂಖ್ಯೆಃ 05

ವೇತನ ಶ್ರೇಣಿ: 44425-1125-47800-1250-52800-1375-58300-1500-64300-1650-74200-1900-83700 ಮತ್ತು ಇತರೇ ಭತ್ಯೆಗಳು.

ಮೀಸಲಾತಿ ವರ್ಗ	ಇತರೆ	ಮಹಿಳೆಯರು	ಗ್ರಾಮೀಣ	ಅಂಗವಿಕಲ	ಒಟ್ಟು
ಸಾಮಾನ್ಯ ಅಭ್ಯರ್ಥಿ	-	-	**01**	**01****	**02**
ಪ್ರವರ್ಗ-2ಎ	**01**	-	-	-	**01**
ಪರಿಶಿಷ್ಟ ಜಾತಿ	-	**01**	-	-	**01**
ಪರಿಶಿಷ್ಟ ಪಂಗಡ	**01***	-	-	-	**01**
ಒಟ್ಟು	**02**	**01**	**01**	**01**	**05**

*ಬ್ಯಾಕ್‌ಲಾಗ್ ಹುದ್ದೆ
** ದೃಷ್ಟಿಹೀನ ಮತ್ತು ಕಡಿಮೆ ದೃಷ್ಟಿಯುಳ್ಳವರಿಗೆ -

"ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 149 ಎಸ್.ಆರ್.ಆರ್ 2020 ಬೆಂಗಳೂರು ದಿನಾಂಕ 25.09.2009 ಮತ್ತು ಆದೇಶ ಸಂಖ್ಯೆ ಸಿಆಸುಇ 02 ಸೆಹಿಮ 2023 ಬೆಂಗಳೂರು ದಿನಾಂಕ 08.03.2023 2020 ರನ್ವಯ ಒಂದು ವೇಳೆ ಅಧಿಸೂಚಿಸಿರುವ ಅಂಗವಿಕಲತೆ ಹೊಂದಿರುವ ಅಭ್ಯರ್ಥಿ ಲಭ್ಯವಿಲ್ಲದೇ ಇದ್ದಲ್ಲಿ, ಅಂತಹ ರಿಕ್ತ ಸ್ಥಾನವನ್ನು ಮುಂದಿನ ನೇಮಕಾತಿಗೆ ಮುಂದುಕ್ಕೊಯ್ಯತಕ್ಕದ್ದು ಮುಂದಿನ ನೇಮಕಾತಿಯಲ್ಲಿ ಅಂತಹ ಅಭ್ಯರ್ಥಿಗಳು ಆಯ್ಕೆಯಾದಲ್ಲಿ ಮೊದಲಿಗೆ ಈ ಹಿಂದಿನ ನೇಮಕಾತಿ ಪ್ರಕ್ರಿಯೆಯಲ್ಲಿ ಅಧಿಸೂಚಿಸಿರುವ ಅಭ್ಯರ್ಥಿಗಳು ಲಭ್ಯವಿಲ್ಲದ ಕಾರಣ ಮುಂದಕ್ಕೆ ತರಲಾದ ಹುದ್ದೆಗಳಿಗೆ ಎದುರಾಗಿ ಮೊದಲು ಅಂತಹ ಅಂಗವಿಕಲ ಅಭ್ಯರ್ಥಿಗಳನ್ನು ಭರ್ತಿಮಾಡತಕ್ಕದ್ದು. ಒಂದು ವೇಳೆ ಎರಡನೇ ನೇಮಕಾತಿಯ ಸಂದರ್ಭದಲ್ಲಿಯೂ ಅರ್ಹ ಅಭ್ಯರ್ಥಿ ಲಭ್ಯವಾಗದೇ ಹೋದಲ್ಲಿ. ಆಯಾ ಪ್ರವರ್ಗದ ಇತರೆ ಅರ್ಹ ಅಭ್ಯರ್ಥಿಳಿಂದ ಭರ್ತಿ ಮಾಡಿಕೊಳ್ಳತಕ್ಕದ್ದು ಎಂದು ತಿಳಿಸಿರುತ್ತಾರೆ".

ಮಹಿಳಾ ಅಭ್ಯರ್ಥಿಗಳು, ಲಭ್ಯವಿರದೇ ಇದ್ದ ಪಕ್ಷದಲ್ಲಿ ಆ ಹುದ್ದೆಗಳನ್ನು ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

ವಿದ್ಯಾರ್ಹತೆ 1 ಅರ್ಜಿಗಳನ್ನು ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು ಪದವಿ ಪೂರ್ವ ಶಿಕ್ಷಣ ಇಲಾಖೆ ನಡೆಸುವ ದ್ವಿತೀಯ ವರ್ಷದ ಪದವಿ ಪೂರ್ವ ಶಿಕ್ಷಣ ಕೋರ್ಸಿನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ ಡಿಪ್ಲೋಮಾ ಇನ್ ಕಮರ್ಷಿಯಲ್ ಪ್ರಾಕ್ಟಿಸ್ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು.

2 ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯಿಂದ ನಡೆಸುವ ಕನ್ನಡ ಹಾಗೂ ಆಂಗ್ಲ ಭಾಷೆಯ ಶೀಘ್ರಲಿಪಿಯಲ್ಲಿ ಹಿರಿಯ ದರ್ಜೆ (ಸೀನಿಯರ ಗ್ರೇಡ) ಮತ್ತು ಕನ್ನಡ ಮತ್ತು ಆಂಗ್ಲ ಭಾಷೆಯ ಬೆರಳಚ್ಚು ಹಿರಿಯ ದರ್ಜೆ (ಸೀನಿಯರ ಗ್ರೇಡ) ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ ಡಿಪ್ಲೋಮಾ ಇನ್ ಕಮರ್ಷಿಯಲ್ ಪ್ರಾಕ್ಟಿಸ್ ಪದವಿಯೊಂದಿಗೆ ಕನ್ನಡ ಹಾಗೂ ಆಂಗ್ಲ ಭಾಷೆಯ ಶೀಘ್ರಲಿಪಿ ಹಾಗೂ ಬೆರಳಚ್ಚು ವಿಷಯವನ್ನು ಐಚ್ಚಿಕ ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರಬೇಕು ಅಥವಾ

3 ಡಿಪ್ಲೋಮಾ ಇನ್ ಕಮರ್ಷಿಯಲ್ ಪ್ರಾಕ್ಟಿಸ್ / ಸೆಕ್ರೆಟರಿಯಲ್ ಪ್ರಾಕ್ಟಿಸ್ ಉತ್ತೀರ್ಣರಾಗಿರತಕ್ಕದ್ದು ಮತ್ತು ಅದರಲ್ಲಿ ಕನ್ನಡ / ಆಂಗ್ಲ ಭಾಷೆಯಲ್ಲಿ ಯಾವುದಾದರೂ ಒಂದು ಭಾಷೆಯಲ್ಲಿ ಶೀಘ್ರಲಿಪಿ ಹಾಗೂ ಬೆರಳಚ್ಚು ವಿಷಯದಲ್ಲಿ ಉತ್ತೀರ್ಣರಾಗಿದ್ದರೆ ಅಂತಹ ಅಭ್ಯರ್ಥಿಗಳು ಉಳಿದ ಕನ್ನಡ / ಆಂಗ್ಲ ಭಾಷೆಯ ಶೀಘ್ರಲಿಪಿ ಹಾಗೂ ಬೆರಳಚ್ಚು ಪರೀಕ್ಷೆಯನ್ನು ಕರ್ನಾಟಕ ಫ್ರೌಡ ಶಿಕ್ಷಣ ಪರೀಕ್ಷಾ ಮಂಡಳಿ ವತಿಯಿಂದ ನಡೆಸುವ ಹಿರಿಯ ದರ್ಜೆ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು.

ಆಯ್ಕೆ ವಿಧಾನ :

ಕರ್ನಾಟಕ ಅಧೀನ ನ್ಯಾಯಾಲಯಗಳು (ಮಿನಿಸ್ಟ್ರಿಯಲ್ ಮತ್ತು ಇತರೆ ಹುದ್ದೆಗಳು) (ನೇಮಕಾತಿ) ನಿಯಮಗಳು ೧೯೮೨ ಮತ್ತು (ತಿದ್ದುಪಡಿ) ನಿಯಗಳು ೨೦೦೭ರ ಅನ್ವಯ ಅಭ್ಯರ್ಥಿಗಳಿಗೆ ಕನ್ನಡ ಹಾಗೂ ಇಂಗ್ಲೀಷ ಭಾಷೆಗಳಲ್ಲಿ ಪ್ರತಿ ನಿಮಿಷಕ್ಕೆ **120** ಪದಗಳ ವೇಗದಂತೆ **5** ನಿಮಿಷಗಳ ಉಕ್ತಲೇಖನ ನೀಡಿ ನಂತರ **45** ನಿಮಿಷಗಳ ಅವಧಿಯಲ್ಲಿ ಗಣಕಯಂತ್ರದ ಮೇಲೆ ಲಿಪ್ಯಂತರ ಮಾಡಲು ಹೇಳಲಾಗುವುದು.

ಟಿಪ್ಪಣಿ : ಸಾಮರ್ಥ ಪರೀಕ್ಷೆಯು ಕನ್ನಡ ಹಾಗೂ ಇಂಗ್ಲೀಷ ಎರಡರಲ್ಲಿಯೂ ಗರಿಷ್ಠ ೧೦೦ ಅಂಕಗಳನ್ನು ಒಳಗೊಂಡಿದ್ದು ಅದರಲ್ಲಿ ತೇರ್ಗಡೆಯಾಗಲು ಕನಿಷ್ಟ ೪೦ ಅಂಕಗಳನ್ನು ಎರಡರಲ್ಲಿಯೂ ಪಡೆಯಬೇಕು ಮತ್ತು ಸಂದರ್ಶನವು ೧೦ ಅಂಕಗಳನ್ನೊಳಗೊಂಡಿರುತ್ತದೆ.

ವಯೋಮಿತಿ (ಅರ್ಜಿ ಸಲ್ಲಿಸಲು ಕೊನೆಯ ದಿನಾಂಕಕ್ಕೆ ಅನುಗುಣವಾಗಿ)

ವಯೋಮಿತಿ ಸಡಿಲಿಕೆ :

1. **ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದಂದು ಅಭ್ಯರ್ಥಿಯು**

a) ಕನಿಷ್ಟ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು ಮತ್ತು ಗರಿಷ್ಠ ವಯಸ್ಸನ್ನು ಮೀರಿರ ಕೂಡದು.

b) ಗರಿಷ್ಠ ವಯೋಮಿತಿ :

ಸಾಮಾನ್ಯ ವರ್ಗ	:	35+5* ವರ್ಷ ಮೀರಿರಬಾರದು
ಪ್ರವರ್ಗ 2ಎ, 2ಬಿ, 3ಎ, 3ಬಿ	:	38 +5* ವರ್ಷ ಮೀರಿರಬಾರದು
ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ ಪ್ರವರ್ಗ –1	:	40 +5* ವರ್ಷ ಮೀರಿರಬಾರದು

ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 262 ಸೇನೆನಿ 2025, ದಿನಾಂಕ 29.01.2026 ರನ್ವಯ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಈ ಆದೇಶ ಹೊರಡಿಸಿದ ದಿನಾಂಕದ ನಂತರ ಮುಂದಿನ ದಿನಾಂಕ 31.12.2027 ರವರೆಗೆ ನೇರ ನೇಮಕಾತಿ ಅರ್ಜಿಗಳನ್ನು ಆಹ್ವಾನಿಸಿ ಹೊರಡಿಸಿರುವ ಅಧಿಸೂಚನೆಗಳನ್ವಯ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಆಯಾಯ ನೇಮಕಾತಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಟ ವಯೋಮಿತಿಯಲ್ಲಿ ಒಂದು ಬಾರಿ ಕ್ರಮವಾಗಿ (as a one time measure) 5 ವರ್ಷಗಳ ಸಡಲಿಕೆ ನೀಡಿ ಆದೇಶಿಸಲಾಗಿದೆ ಎಂದು ತಿಳಿಸಿರುತ್ತಾರೆ.

1. ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆಗೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು ಅವರು ಎಷ್ಟು ವರ್ಷಗಳು ಅಥವಾ ಅವಧಿಗೆ ಹುದ್ದೆಯಲ್ಲಿ ಸೇವೆ ಸಲ್ಲಿಸಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಎರಡರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ಸಡಲಿಕೆಯನ್ನು ನೀಡಲಾಗುವುದು.

2. ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ, ಅವನು ಸಶಸ್ತ್ರ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಆ ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟುಗುವುದೋ ಅಷ್ಟು ವರ್ಷಗಳು.

3. ಅಭ್ಯರ್ಥಿಯು ಅಂಗವಿಕಲನಾಗಿದ್ದಲ್ಲಿ, ವಿಧವೆಯಾಗಿದ್ದಲ್ಲಿ ಮತ್ತು ಜೀತ ಕಾರ್ಮಿಕನಾಗಿದ್ದಲ್ಲಿ 10 ವರ್ಷಗಳು.

4. ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದ ಪಕ್ಷದಲ್ಲಿ ಗರಿಷ್ಠ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸೇವೆ ಸಲ್ಲಿಸಿದ್ದಾರೋ ಅಷ್ಟು ವರ್ಷಗಳ ಅಥವಾ 05 ವರ್ಷಗಳ ಅವಧಿಗೆ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

5. ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್ಸ್ ನಲ್ಲಿ ಪೂರ್ಣಕಾಲಿಕ ಪರೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕೆಡೆಟ್ ಪರೀಕ್ಷಕರಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು

6. ಅಭ್ಯರ್ಥಿಯು ರಾಜ್ಯ ಸರ್ಕಾರದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆ ಮೇರೆಗೆ ನೇಮಕಗೊಂಡು ಗ್ರಾಮ ಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಪಕ್ಷದಲ್ಲಿ ಅಂತಹ ಗ್ರಾಮ ಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.

ಪರಿವೀಕ್ಷಣಾ ಅವಧಿ:

ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) ೧೯೭೭ರ ಪ್ರಕಾರ ೨ ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಈ ಅವಧಿಯಲ್ಲಿ ಅಭ್ಯರ್ಥಿಗಳು ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ ಮತ್ತು ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು.

ಕಂಪ್ಯೂಟರ ಸಾಕ್ಷರತಾ ಪರೀಕ್ಷೆ:

ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸರಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇಇಳಖಃಸೇವನೇಃ೨೦೦೮ ಬೆಂಗಳೂರು ದಿನಾಂಕಃ **07-03-2012** ರಂತೆ ನಿಗದಿಪಡಿಸುವ ಕಂಪ್ಯೂಟರ ಸಾಕ್ಷರತಾ ಪರೀಕ್ಷೆಯನ್ನು ಪರಿವೀಕ್ಷಣಾ ಅವಧಿ ಪೂರೈಸುವುದರ ಒಳಗಾಗಿ ಶೇಕಡಾ **50** ರಂತೆ ಅಂಕಗಳನ್ನು ಪಡೆದು ಉತ್ತೀರ್ಣರಾಗತಕ್ಕದ್ದು.

ನಿಗದಿತ ಅರ್ಜಿ ಶುಲ್ಕ - ಪಾವತಿಸಬೇಕಾದ ಶುಲ್ಕ ಹಾಗೂ ವಿಧಾನ

ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ	ರೂ.**200/-**
ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ	ರೂ.**100/-**
ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ ಅರ್ಜಿ ಶುಲ್ಕ ವಿನಾಯಿತಿ ಇರುತ್ತದೆ.	

ನಿಗದಿತ ಶುಲ್ಕವನ್ನು ನ್ಯಾಯಾಲಯದ ವೆಬ್‌ಸೈಟ್ https://kalaburagi.dcourts.gov.in/Judges/online-recruitment/ ರಲ್ಲಿ ನೀಡಲಾದ ಲಿಂಕ್ ಮುಖಾಂತರ **online payment through net banking /Credit-Card/ Debit-Card/UPI** ಸೌಲಭ್ಯದ ಮೂಲಕ ಪಾವತಿಸಕ್ಕದ್ದು. ಇದನ್ನು ಹೊರತುಪಡಿಸಿ ಯಾವುದೇ ಚಲನ್/ಡಿಮಾಂಡ್ ಡ್ರಾಫ್ಟ್/ ಪೋಸ್ಟಲ್ ಆರ್ಡರ್/ ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಯನ್ನು ತಿರಸ್ಕರಿಸಲಾಗುವುದು.

ಅಭ್ಯರ್ಥಿಗಳು ON-LINE ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು :

1. ಅಭ್ಯರ್ಥಿಗಳು ಅರ್ಜಿಯನ್ನು ON-LINE ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು, ಒಂದು ವೇಳೆ ಅರ್ಜಿ ಸರಿಯಾಗಿರದಿದ್ದಲ್ಲಿ ತಿರಸ್ಕರಿಸಲಾಗುವುದು.

2. ಅಭ್ಯರ್ಥಿಯು ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಇ-ಮೇಲ್ ಐಡಿಯನ್ನು ಹೊಂದಿದ್ದಲ್ಲಿ ನಮೂದಿಸುವುದು. ಒಂದು ವೇಳೆ SMS ಅಥವಾ ಇ-ಮೇಲ್ ಮುಖಾಂತರ ತಮಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರ ಹೊಣೆಯಾಗಿರುವುದಿಲ್ಲ.

3. ಅಭ್ಯರ್ಥಿಯ ಭಾವಚಿತ್ರ ಮತ್ತು ಸಹಿಯನ್ನು ಸ್ಕಾನ್ ಮಾಡಿ ಅಪ್‌ಲೋಡ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

   ಅ) ಬಣ್ಣದ ಭಾವಚಿತ್ರವು ಇತ್ತೀಚಿನದಾಗಿದ್ದು, ಅಳತೆಯಲ್ಲಿ 5cm ಉದ್ದ x 3.6cm ಅಗಲವುಳ್ಳದ್ದಾಗಿರಬೇಕು ಮತ್ತು 50 ಕೆಬಿ ಅಳತೆಯದ್ದಾಗಿರಬೇಕು. ಭಾವಚಿತ್ರದ ಹಿಂಬದಿಯು ತಿಳಿಬಣ್ಣದ್ದಾಗಿದ್ದು ಅದರಲ್ಲಿಯೂ ಹಿಂಬದಿಯ ಭಾಗ ಬಿಳಿಬಣ್ಣದ್ದಾಗಿರಬೇಕು.

   ಬ) ಭಾವಚಿತ್ರವನ್ನು ಒಂದು ಬಿಳಿ ಹಾಳೆಯ ಮೇಲೆ ಇಟ್ಟು ಅದರ ಕೆಳಗೆ ಕಪ್ಪು ಬಾಲಪಾಯಿಂಟ ಪೆನ್ನಿನಲ್ಲಿ ಸಹಿಯನ್ನು ಮಾಡಿ ಇದನ್ನು ಸ್ಕಾನ್ ಮಾಡಿ ಅರ್ಜಿಗೆ ಅಪ್‌ಲೋಡ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು).

4. ON-LINE ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನು ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಅರ್ಜಿಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು. ತದನಂತರ ಅರ್ಜಿಯನ್ನು ***down load*** ಮಾಡಿಕೊಂಡು ಅದರ ಪ್ರತಿಯನ್ನು ಹಾಗೂ ಶುಲ್ಕವನ್ನು ತುಂಬಿದ ಬಗ್ಗೆ ***SBI E-pay receipt*** ನ ಪ್ರತಿಯನ್ನು ನೇಮಕಾತಿ ಪ್ರಕ್ರಿಯೆ ಮುಗಿಯುವರೆಗೂ ತಮ್ಮ ಹತ್ತಿರ ಕಾಯ್ದಿರಿಸಕೊಳ್ಳತಕ್ಕದ್ದು.

5. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ, ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂತಿರುಗಿಸಲಾಗುವುದಿಲ್ಲ.

7. ನ್ಯಾಯಾಲಯದ ಅಧಿಕೃತ ವೆಬ್‌ಸೈಟ್ https://kalaburagi.dcourts.gov.in/Judges/online-recruitment/ ನಲ್ಲಿ **15.12.2026** ದಿನಾಂಕದವರೆಗೂ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಅರ್ಜಿಯನ್ನು ಆನ್‌ಲೈನ್ ಮೂಲಕ ನೊಂದಾಯಿಸಲು ಃ ಸಲ್ಲಿಸಲು **15.12.2026** ರ ರಾತ್ರಿ **11-59** ರ ವರೆಗೆ ಅವಕಾಶವಿರುತ್ತದೆ

ಮತ್ತು

ಶುಲ್ಕವನ್ನು ಪಾವತಿಸಲು **17.12.2026** ಕಡೆಯ ದಿನಾಂಕವಾಗಿದ್ದು ಅದರೊಳಗೆ ಭಾರತೀಯ ಸ್ಟೇಟ್ ಬ್ಯಾಂಕ್ ಶಾಖೆಯ ವ್ಯವಹಾರದ ವೇಳೆಯಲ್ಲಿ ಪಾವತಿಸತಕ್ಕದ್ದು.

8. ಅರ್ಹ ಅಭ್ಯರ್ಥಿಗಳಿಗೆ SMS ಹಾಗೂ ಇ-ಮೇಲ್ ಮುಖಾಂತರ ಮಾಹಿತಿ ನೀಡಲಾಗುವುದು. ಸಂದರ್ಶನಕ್ಕೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು ಹಾಗೂ ಅಭ್ಯರ್ಥಿಯು ಸದರೀ ಪಟ್ಟಿಯನ್ನು ಡೌನಲೋಡ್ ಮಾಡಿಕೊಂಡು ಸಂದರ್ಶನಕ್ಕೆ ಹಾಜರಾಗುವಾಗ ತಪ್ಪದೇ ಹಾಜರುಪಡಿಸತಕ್ಕದ್ದು.

9. ಸೇವಾನಿರತ ಅಭ್ಯರ್ಥಿಗಳು ಅರ್ಜಿಗಳ ಸ್ವೀಕೃತಿಗಾಗಿ ನಿಗದಿಪಡಿಸಲಾದ ದಿನಾಂಕ ಹಾಗೂ ಸಮಯವನ್ನು ಮೀರದಂತೆ ಆನ್-ಲೈನನಲ್ಲಿ ತಮ್ಮ ಅರ್ಜಿಗಳನ್ನು ಸಲ್ಲಿಸತಕ್ಕದ್ದು ಮತ್ತು ಸಂಬಂಧಪಟ್ಟ ಪ್ರಾಧಿಕಾರದಿಂದ ನೀಡಲಾದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಹೊಂದಿರತಕ್ಕದ್ದು.

10. ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿನಾಂಕ 19.11.2005ರ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ ಸಿಆಸುಇ 115 ಸೆನೆನಿ 2005ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು.

11. ಅಭ್ಯರ್ಥಿಗಳು ತಮ್ಮ ಎಸ್.ಎಸ್.ಎಲ್.ಸಿ ಅಂಕಗಳು / ದ್ವಿತೀಯ ಪಿಯುಸಿ ಅಂಕಗಳು ಶೇಣ್ರಿಯಲ್ಲಿದ್ದರೆ ಅಥವಾ ಸಿ.ಜಿ.ಪಿ.ಎ ಆಗಿದ್ದರೆ ಅದನ್ನು ಅಂಕಗಳಾಗಿ ಪರಿವರ್ತಿಸಿ ಗರಿಷ್ಠ ಅಂಕಗಳು, ಪಡೆದ ಅಂಕಗಳು ಮತ್ತು ಒಟ್ಟು ಶೇಕಡಾವಾರನ್ನು ಕಡ್ಡಾಯವಾಗಿ ನಿಗದಿತ ಕಾಲಂನಲ್ಲಿ ನಮೂದಿಸಬೇಕು.

12. ಅಭ್ಯರ್ಥಿಗಳು ಈ ಕೆಳಕಂಡ ಪ್ರಮಾಣ ಪತ್ರಗಳನ್ನು ನಿಗದಿತ ನಮೂನೆಗಳಲ್ಲಿ *ON-LINE* ಮೂಲಕ ಅರ್ಜಿ ಭರ್ತಿ ಮಾಡಲು ನಿಗದಿ ಪಡಿಸಿದ ಕೊನೆಯ ದಿನಾಂಕದವರೆಗೆ ಸಂಬಂಧಪಟ್ಟ ಪ್ರಾಧಿಕಾರದಿಂದ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಕೋರಿರುವ ಮೀಸಲಾತಿ ಪ್ರಮಾಣ ಪತ್ರಗಳು ಮತ್ತು ಇತರೇ ಪ್ರಮಾಣ ಪತ್ರಗಳನ್ನು ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಅವುಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ಅರ್ಹರಾದಾಗ ಆ ಸಮಯದಲ್ಲಿ

ಹಾಜರು ಪಡಿಸಬೇಕು. ಇತರೇ ನಮೂನೆಗಳಲ್ಲಿ ಅಥವಾ ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕದ ನಂತರ ಪಡೆದ (ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ ಹೊರತು ಪಡಿಸಿ) ಯಾವುದೇ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ, ತಪ್ಪಿದ್ದಲ್ಲಿ ಇವರ ಮೀಸಲಾತಿಯನ್ನು ಃ ಅಭ್ಯರ್ಥಿತ್ವವನ್ನು ಅನರ್ಹಗೊಳಿಸಲಾಗುವುದು.

ಅ) ಹುದ್ದೆಗೆ ನಿಗದಿಪಡಿಸಿದ ಶುಲ್ಕವನ್ನು ಪಾವತಿಸಿದ SBI e-pay receipt ನ ಪ್ರತಿ.

ಆ) ಜನ್ಮ ದಿನಾಂಕದ ದೃಢೀಕರಣಕ್ಕಾಗಿ ಎಸ್.ಎಸ್.ಎಲ್.ಸಿ ಅಂಕಪಟ್ಟಿ/ವರ್ಗಾವಣೆ ಪಟ್ಟಿ/ಕ್ಯುಮುಲೇಟೀವ್ ರೆಕಾರ್ಡ ದಾಖಲಾತಿಗಳು.

ಇ) ಪರಿಶಿಷ್ಟ ಜಾತಿ (ಪ್ರವರ್ಗ-ಎ, ಪ್ರವರ್ಗ-ಬಿ ಮತ್ತು ಪ್ರವರ್ಗ-ಸಿ), (ಪರಿಶಿಷ್ಟ ಪಂಗಡ), (ಪ್ರವರ್ಗ-1), (ಪ್ರವರ್ಗ-2ಎ ಮತ್ತು ಪ್ರವರ್ಗ-2ಬಿ), (ಪ್ರವರ್ಗ-3ಎ, ಪ್ರವರ್ಗ-3ಬಿ) ಮಿಸಲಾತಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ) ನಿಗದಿತ ನಮೂನೆಯಲ್ಲಿ ಅಧಿಕೃತ ಪ್ರಾಧಿಕಾರದಿಂದ ಪಡೆದು ಸಲ್ಲಿಸಬೇಕು.

ಈ) ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಗ್ರಾಮೀಣ ಮಿಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು 2ರಲ್ಲಿ ಹಾಗೂ ಗ್ರಾಮೀಣ ಮೀಸಲಾತಿ ಕೋರಿದ ಪರಿಶಿಷ್ಟ ಜಾತಿ (ಪ್ರವರ್ಗ-ಎ, ಪ್ರವರ್ಗ-ಬಿ ಮತ್ತು ಪ್ರವರ್ಗ-ಸಿ) / ಪರಿಶಿಷ್ಟ ಪಂಡಗ/ ಪ್ರವರ್ಗ-1/ ಪ್ರವರ್ಗ-2ಎ/ ಪ್ರವರ್ಗ-2ಬಿ/ ಪ್ರವರ್ಗ-3/ಎ ಪ್ರವರ್ಗ-3ಬಿ ಅಭ್ಯರ್ಥಿಗಳು ನಮೂನೆ-2 ರಲ್ಲಿ ಮಾತ್ರ) ನಿಗದಿತ ನಮೂನೆಯಲ್ಲಿ ಅಧಿಕೃತ ಪ್ರಾಧಿಕಾರದಿಂದ ಪಡೆದು ಸಲ್ಲಿಸಬೇಕು.

ಉ) ಮಾಜಿ ಸೈನಿಕ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆಯಾದ/ವಿಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರವನ್ನು ಸಲ್ಲಿಸುವುದು.

ಊ) ವಿಧವೆಯರು, ಜೀತ ಕಾರ್ಮಿಕರು ವಯೋಮಿತಿ ರಿಯಾಯ್ತಿ ಕೋರಲು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರವನ್ನು ಸಲ್ಲಿಸುವುದು.

ಎ) ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ (ವಯೋಮಿತಿ ಸಡಿಲಿಕೆಗಾಗಿ ಮೀಸಲಾತಿ ಕೋರಿದ್ದಲ್ಲಿ).

ಏ) ಕಲ್ಯಾಣ-ಕರ್ನಾಟಕ ಪ್ರದೇಶದ ಸ್ಥಳೀಯ ಅಭ್ಯರ್ಥಿಗಳಿಗಾಗಿ (371-J) ಅರ್ಜಿ ಸಲ್ಲಿಸುವವರು ಸರ್ಕಾರದ ಅಧಿಸೂಚನೆ ಸಂಖ್ಯೆಃ ಡಿಪಿಎಆರ್/06/ಪಿಎಲ್ಎಕ್ಸ/2012 ದಿನಾಂಕಃ 06.11.2013ರಲ್ಲಿ ಗೊತ್ತುಪಡಿಸಿದ ನಮೂನೆಯಲ್ಲಿ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಪಡೆದ ಅರ್ಹತಾ ಪ್ರಮಾಣ ಪತ್ರ.

ಐ) ಅರ್ಜಿಯನ್ನು ಕಳುಹಿಸಲು ನಿಗದಿಪಡಿಸಿದ ದಿನಾಂಕದಿಂದ 06 ತಿಂಗಳ ಒಳಗೆ ಇಬ್ಬರು ಗೌರವಾನ್ವಿತ ವ್ಯಕ್ತಿಗಳು ನೀಡಿರುವ ನಡತೆ ಪ್ರಮಾಣ ಪತ್ರಗಳು ಹಾಗೂ ಶಾಲಾ ನಡತೆ ಪ್ರಮಾಣ ಪತ್ರ ಸಲ್ಲಿಸುವುದು.

ಒ) ನಿರಾಕ್ಷೇಪಣಾ ಪತ್ರ (ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಕ.ನಾ.ಸೇ ನಿಯಮಗಳು (ಸಾಮಾನ್ಯ ನೇಮಕಾತಿ) ನಿಯಮ 1977 ತಿದ್ದುಪಡಿ ನಿಯಮ 2020 ರೂಲ್ 11ನ್ನು ಅನುಸರಿಸಲು ತಿಳಿಸಲಾಗಿದೆ)

13. **ಅಂತಿಮವಾಗಿ ಅಭ್ಯರ್ಥಿಯು ನಕಲಿ ಅಭ್ಯರ್ಥಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗೆ ನಡೆಸಲಾದ ಪರಿಶೀಲನೆ**

ಪ್ರಕ್ರಿಯೆಗಳ ಸಂದರ್ಭಗಳಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೇ ಆಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಭಿಸಿರುವನೆಂದು ಕಂಡುಬಂದಲ್ಲಿ ಅವನು ಃ ಅವಳು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೇ, ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

14. ಕೇವಲ ONLINE ಮೂಲಕ ಅರ್ಜಿ ಸಲ್ಲಿಸಿದ್ದಲ್ಲಿ, ಪರೀಕ್ಷೆಗೆ ಹಾಜರಾಗಿ ಪರೀಕ್ಷೆಯಲ್ಲಿ ಅರ್ಹತೆ ಪಡೆದ ಮಾತ್ರಕ್ಕೆ ಅಭ್ಯರ್ಥಿಗಳಿಗೆ ಈ ಮೇಲಿನ ಹುದ್ದೆಗಳ ನೇಮಕಾತಿಯಲ್ಲಿ ಯಾವುದೇ ಹಕ್ಕನ್ನು ನೀಡುವುದಿಲ್ಲ. ನೇಮಕಾತಿಯು ಸರ್ಕಾರವು ಕಾಲಕಾಲಕ್ಕೆ ನಿಗದಿಪಡಿಸುವ ಅರ್ಹತಾ ಮಾನದಂಡಗಳಿಗೆ ಒಳಪಟ್ಟಿರುತ್ತದೆ.

15. ಮೇಲಿನ ಯಾವುದೇ ನಿಯಮಗಳು / ಕಾರ್ಯವಿಧಾನಗಳಿಗೆ ಸಂಬಂಧಿಸಿದಂತೆ ವ್ಯತ್ಯಾಸ ಅಥವಾ ಅಸ್ಪಷ್ಟತೆ ಕಂಡು ಬಂದಲ್ಲಿ, ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 ಹಾಗೂ ಕಾಲಕಾಲಕ್ಕೆ ಆಗಿರುವ ಅದರ ತಿದ್ದುಪಡಿ ನಿಯಮಗಳು, ಸರ್ಕಾರದ ಆದೇಶ ಸಂಖ್ಯೆಃ ಸಿಆಸುಇ 149 ಎಸ್ಆರ್ಆರ್ 2020 ದಿನಾಂಕಃ 25.09.2020 ಹಾಗೂ ಈ ಸಂಬಂಧ ನ್ಯಾಯಾಂಗ ಇಲಾಖೆಗೆ ಅನ್ವಯಿಸುವ ಆದೇಶಗಳು, ಕರ್ನಾಟಕ ನಾಗರಿಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2021 ಹಾಗೂ ಕಾಲಕಾಲಕ್ಕೆ ಆಗಿರುವ ಅದರ ತಿದ್ದುಪಡಿ ನಿಯಮಗಳು, ಸರ್ಕಾರದ ಆದೇಶ ಸಂಖ್ಯೆಃ ಸಿಆಸುಇ 02 ಸೇಹಿಮ 2026, ದಿನಾಂಕಃ 13.05.2026, ಸರ್ಕಾರಿ ಆದೇಶ ಸಂಖ್ಯೆಃ ಸಿಆಸುಇ 05 ಸೆಹಿಮ 2026, ದಿನಾಂಕ 13.10.2026 ಹಾಗೂ ಕಾಲಕಾಲಕ್ಕೆ ಆಗಿರುವ ಅದರ ತಿದ್ದುಪಡಿಗಳು ಮತ್ತು ನ್ಯಾಯಾಂಗ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳು ಅನ್ವಯವಾಗುತ್ತವೆ.

16. ಈ ನೇಮಕಾತಿ ಸಂಬಂಧವಾಗಿ ಅಭ್ಯರ್ಥಿಗಳು ಈ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರ ನಡೆಸಲು ಅವಕಾಶವಿರುವುದಿಲ್ಲ.

17. ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆಃ 08472 221856. (10.00 AM to 6.00 PM).

5/11/26

(ಜಿ. ಎಲ್. ಲಕ್ಷ್ಮೀನಾರಾಯಣ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಕಲಬುರಗಿ.

ಪ್ರತಿಯನ್ನು :-

ಮಹಾ ವಿಲೇಖನಾಧಿಕಾರಿಗಳು, ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇವರಿಗೆ ಮುಖ ಪತ್ರದೊಂದಿಗೆ ಮಾಹಿತಿಗಾಗಿ ಸಲ್ಲಿಸಲಾಗಿದೆ.

ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ರವಾನಿಸಲಾಗಿದೆ :-

1. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ಸಿಟಿ, ಬೆಂಗಳೂರು ಗ್ರಾಮಾಂತರ, ಮೈಸೂರು, ಬಾಗಲಕೋಟೆ, ಬೆಳಗಾವಿ, ಬಳ್ಳಾರಿ, ಬೀದರ, ವಿಜಯಪುರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ, ಧಾರವಾಡ, ಗದಗ, ಹಾಸನ, ಹಾವೇರಿ, ಕೊಡಗು, ಕೋಲಾರ, ಕೊಪ್ಪಳ, ಮಂಗಳೂರು, ಮಂಡ್ಯ, ರಾಮನಗರ, ರಾಯಚೂರು, ತುಮಕೂರು, ಉಡುಪಿ, ಯಾದಗಿರಿ, ಶಿವಮೊಗ್ಗ ಮತ್ತು ಕಾರವಾರ ಇವರಿಗೆ, ನೇಮಕಾತಿ ಅಧಿಸೂಚನೆಯನ್ನು ತಮ್ಮ ನ್ಯಾಯಾಲಯದ ಸೂಚನೆ ಫಲಕದಲ್ಲಿ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಿ
2. ವಿಲೇಖನಾಧಿಕಾರಿಗಳು ನಗರ ಸಿವಿಲ್ ನ್ಯಾಯಾಲಯ, ಬೆಂಗಳೂರು, ಇವರಿಗೆ ನೇಮಕಾತಿ ಅಧಿಸೂಚನೆಯನ್ನು ತಮ್ಮ ನ್ಯಾಯಾಲಯದ ಸೂಚನೆ ಫಲಕದಲ್ಲಿ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಿ
3. ನಿರ್ದೇಶಕರು, ರಾಜ್ಯ ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ
4. ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ ಸರ್ಕಾರಿ ಹೊರವಲಯ ಮುದ್ರಣಾಲಯ ಮೈಸೂರು ರಸ್ತೆ, ಬೆಂಗಳೂರು ಇವರಿಗೆ
5. ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ, ಕಲಬುರಗಿ ಜಿಲ್ಲೆ ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ
6. ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ, ಕಲಬುರಗಿ ಸೂಚನ ಫಲಕಕ್ಕೆ
7. ಕುಟುಂಬ ನ್ಯಾಯಾಲಯ, ಕಲಬುರಗಿ.
8. ಕಾರ್ಮಿಕ ನ್ಯಾಯಾಲಯ, ಕಲಬುರಗಿ.
9. ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಮುಖ್ಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಕಲಬುರಗಿ
10. ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಚಿಂಚೋಳಿ / ಚಿತ್ತಾಪೂರ / ಅಫಜಲಪೂರ / ಜೇವರ್ಗಿ / ಸೇಡಂ / ಆಳಂದ
11. ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಕಲಬುರಗಿ / ಚಿಂಚೋಳಿ / ಆಳಂದ
12. ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸೇಡಂ / ಚಿತ್ತಾಪೂರ / ಜೇವರ್ಗಿ / ಅಫಜಲಪೂರ / ಶಹಬಾದ.

ಇವರಿಗೆ, ನೇಮಕಾತಿ ಅಧಿಸೂಚನೆಯನ್ನು ತಮ್ಮ ನ್ಯಾಯಾಲಯದ ಸೂಚನೆ ಫಲಕದಲ್ಲಿ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಲಾಗಿದೆ.

13. ತಂತ್ರಾಂಶ ತಂತ್ರಜ್ಞರು, ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಕಲಬುರಗಿ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
14. ಕಛೇರಿಯ ಸೂಚನಾ ಫಲಕಕ್ಕೆ
15. ಕಛೇರಿಯ ನಕಲು
16. ಹೆಚ್ಚಿನ ಪ್ರತಿ

******